# ಕರ್ನಾಟಕ ಸರ್ಕಾರ

ಸಂಖ್ಯೆ: ಕಾಇ 18 ಎಲ್ ಡಬ್ಲ್ಯೂ ಎ 2022

ಕರ್ನಾಟಕ ಸರ್ಕಾರದ ಸಚಿವಾಲಯ,
ವಿಕಾಸಸೌಧ,
ಬೆಂಗಳೂರು, ದಿನಾಂಕ: 12.08.2022

## ತಿದ್ದುಪಡಿ

ಸರ್ಕಾರದ ಅಧಿಸೂಚನೆ ಸಂಖ್ಯೆ: ಕಾಇ 18 ಎಲ್ ಡಬ್ಲ್ಯೂ ಎ 2022 ದಿನಾಂಕ: 28.07.2022 ರಲ್ಲಿ "ಭದ್ರತಾ ಏಜೆನ್ಸಿಗಳಲ್ಲಿ ಉದ್ಯೋಗ (ಕಛೇರಿ ಸಿಬ್ಬಂದಿ ಹಾಗೂ ಭದ್ರತಾ ಸಿಬ್ಬಂದಿಗಳನ್ನು ಏಜೆನ್ಸಿಯ ಮೂಲಕ ನಿಯೋಜಿಸಿಕೊಳ್ಳುವ ಎಲ್ಲಾ ಸಂಸ್ಥೆಗಳು ಹಾಗೂ ಉದ್ದಿಮೆಗಳ ಸಹಿತ)" ಅನುಸೂಚಿತ ಉದ್ದಿಮೆಗೆ ಕನಿಷ್ಠ ವೇತನ ದರಗಳನ್ನು ಪರಿಷ್ಕರಿಸಿದ್ದು, ಸದರಿ ಅಧಿಸೂಚನೆಯ ಕನಿಷ್ಠ ವೇತನ ಕೋಷ್ಠಕದಲ್ಲಿ ಈ ಕೆಳಕಂಡ ತಿದ್ದುಪಡಿಗಳನ್ನು ಈ ಅಧಿಸೂಚನೆಯ ಮೂಲಕ ಹೊರಡಿಸಲಾಗಿದೆ.

1) ಪುಟ ಸಂಖ್ಯೆ: 2ರ ಕುಶಲ ಕಾರ್ಮಿಕರು ಶೀರ್ಷಿಕೆಯ ವಲಯ-4ರಲ್ಲಿ ತಿಂಗಳಿಗೆ ರೂ. 11008.00 ಎನ್ನುವ ಬದಲಿಗೆ ರೂ. 13871.76 ಎಂದು ತಿದ್ದಿ ಓದಿಕೊಳ್ಳತಕ್ಕದ್ದು.
2) ಪುಟ ಸಂಖ್ಯೆ: 2ರ ಅಕುಶಲ ಕಾರ್ಮಿಕರು ಶೀರ್ಷಿಕೆಯ ಕೆಳಕಂಡ ಕೋಷ್ಟಕವನ್ನು

| ಅಕುಶಲ ಕಾರ್ಮಿಕರು | | | | | | | | | |
|---|---|---|---|---|---|---|---|---|---|
| | | ವಲಯ-1 | | ವಲಯ-2 | | ವಲಯ-3'-೦ | | ವಲಯ-4 | |
| 4 | ಜವಾನ, ಆಫೀಸ್ ಬಾಯ್, ಅಟೆಂಡರ್, ಹೆಲ್ಪರ್/ ಸಹಾಯಕ/ ದಲಾಯತ್, ಮಜ್ದೂರ್, ಸ್ವೀಪರ್, ಕ್ಲೀನರ್ ಮತ್ತು ಇತರೆ ಅಕುಶಲ ಕೆಲಸಕ್ಕೆ | 445.77 | 11590.14 | 424.55 | 11038.23 | 401.33 | 10512.60 | 493.31 | 12825.96 |

ಎನ್ನುವ ಬದಲಿಗೆ

| | | ವಲಯ-1 | | ವಲಯ-2 | | ವಲಯ-3 | | ವಲಯ-4 | |
|---|---|---|---|---|---|---|---|---|---|
| 4 | ಜವಾನ, ಆಫೀಸ್ ಬಾಯ್, ಅಟೆಂಡರ್, ಹೆಲ್ಪರ್/ ಸಹಾಯಕ/ ದಲಾಯತ್, ಮಜ್ದೂರ್, ಸ್ವೀಪರ್, ಕ್ಲೀನರ್ ಮತ್ತು ಇತರೆ ಅಕುಶಲ ಕೆಲಸಕ್ಕೆ | 571.06 | 14847.65 | 543.87 | 14140.62 | 517.97 | 13467.26 | 493.31 | 12825.96 |

**ಎಂದು ತಿದ್ದಿ ಓದಿಕೊಳ್ಳತಕ್ಕದ್ದು.**

**ಪುಟ ಸಂಖ್ಯೆ: 3 ರ ಕಛೇರಿ ಸಿಬ್ಬಂದಿಗಳು ಮತ್ತು ಚಾಲಕರು ಶೀರ್ಷಿಕೆಯ "ಹಿರಿಯ ಗುಮಾಸ್ತ, ಕ್ಯಾಷಿಯರ್, ಜಡ್ಜ್ ಮೆಂಟ್ ರೈಟರ್, ಸ್ಟೆನೋಗ್ರಾಫರ್, ಸ್ಟೋರ್ ಕೀಪರ್, ರಿಸೆಪ್ಷನಿಸ್ಟ್ (ಸ್ವಾಗತಗಾರರು) ಮತ್ತು ತತ್ಸಮಾನ ಹುದ್ದೆ" ಹಾಗೂ "ಹೆವಿ ವೆಹಿಕಲ್ ಡ್ರೈವರ್, ಟ್ರ್ಯಾಕ್ಟರ್ ಡ್ರೈವರ್ ಬಹು ಆಕ್ಸೆಲ್ ಮತ್ತು ಘನ ವಾಹನ ಚಾಲಕರು, ಅರ್ಥ್ ಮೂವರ್ಸ್ ಚಾಲಕರು, ಕ್ರೇನ್ ಜೋಡಿಸಿದ ವಾಹನ ಚಾಲಕರು, ಟ್ರ್ಯಾಕ್ಟರ್ ಚಾಲಕರು, ರೋಡ್ ರೋಲರ್ ಮತ್ತು ರಸ್ತೆ ನಿರ್ಮಾಣ ಕಾಮಗಾರಿ ವಾಹನಗಳ ಚಾಲಕರು" ವರ್ಗಗಳ ವಲಯ4 ರಲ್ಲಿ ತಿಂಗಳಿಗೆ 11008.00 ಎನ್ನುವ ಬದಲಿಗೆ 13871.76 ಎಂದು ತಿದ್ದಿ ಓದಿಕೊಳ್ಳತಕ್ಕದ್ದು. ಉಳಿದಂತೆ ಸದರಿ ಅಧಿಸೂಚನೆಯಲ್ಲಿ ಯಾವುದೇ ಬದಲಾವಣೆಗಳಿರುವುದಿಲ್ಲ.**

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

(ಎ. ಉಮಾದೇವಿ)
ಪೀಠಾಧಿಕಾರಿ-2
ಕಾರ್ಮಿಕ ಇಲಾಖೆ (ಕನಿಷ್ಠ ವೇತನ)

**PR-755**

**ಕರ್ನಾಟಕ ಸರ್ಕಾರ**

ಸಂಖ್ಯೆ: ನಅಇ 233 ಗುಅಪ್ರಾ 2021

ಕರ್ನಾಟಕ ಸರ್ಕಾರ ಸಚಿವಾಲಯ,
ವಿಕಾಸಸೌಧ,
ಬೆಂಗಳೂರು, ದಿನಾಂಕ: 26.08.2022.

**ಅಧಿಸೂಚನೆ**

ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ, 1961 ರ ಕಲಂ 4-ಎ ರಡಿ ಪ್ರದತ್ತವಾದ ಅಧಿಕಾರದಂತೆ ಸರ್ಕಾರದ ಅಧಿಸೂಚನೆ ಸಂಖ್ಯೆ: ನಅಇ 83 ಗುಅಪ್ರಾ 2017, ದಿನಾಂಕ:27-05-2021 ರಲ್ಲಿ ರಾಯಚೂರು ಜಿಲ್ಲೆ, ಲಿಂಗಸುಗೂರು ಪಟ್ಟಣಕ್ಕೆ "ಸ್ಥಳೀಯ ಯೋಜನಾ ಪ್ರದೇಶ" ಘೋಷಿಸಲಾಗಿರುತ್ತದೆ ಹಾಗೂ ಸದರಿ ಕಾಯ್ದೆಯ ಕಲಂ 4(ಸಿ)(1) ರನ್ವಯ ಮತ್ತು 4(ಸಿ) (3) (i) (ii) (iii) ರ (ಎ) ಹಾಗೂ (iv) ರಡಿಯಲ್ಲಿ ಪ್ರದತ್ತವಾದ ಅಧಿಕಾರ ಚಲಾಯಿಸಿ ಲಿಂಗಸುಗೂರು ಪಟ್ಟಣಕ್ಕೆ ಪ್ರತ್ಯೇಕ ಯೋಜನಾ ಪ್ರಾಧಿಕಾರ ರಚಿಸಿ ಆದೇಶಿಸಲಾಗಿರುತ್ತದೆ. ಮುಂದುವರದು, ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ, 1961 ರ ಕಲಂ 4-ಎ(4) ರಡಿ ಪ್ರದತ್ತವಾದ ಅಧಿಕಾರದಂತೆ ಲಿಂಗಸುಗೂರು ಯೋಜನಾ ಪ್ರಾಧಿಕಾರವು ಮಾನವಿ ಯೋಜನಾ ಪ್ರಾಧಿಕಾರದ ವಲಯ ನಿಯಮಾವಳಿಗಳಂತೆ ಸ್ಥಳೀಯ ಯೋಜನಾ ಪ್ರದೇಶದಲ್ಲಿ ಬರುವ ಅಭಿವೃದ್ಧಿಗಳಿಗೆ ಅನುಮತಿಸಲು ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಲತಾ.ಕೆ)
ಸರ್ಕಾರದ ಅಧೀನ ಕಾರ್ಯದರ್ಶಿ,
ನಗರಾಭಿವೃದ್ಧಿ ಇಲಾಖೆ.

**PR-756**

| | | | |
|---|---|---|---|
| 2 | ಅಳ್ನಾವರ | ಉಪವಿಭಾಗಾಧಿಕಾರಿಗಳು, ಧಾರವಾಡ | ಉಪವಿಭಾಗಾಧಿಕಾರಿಗಳು, ಧಾರವಾಡ |
| 3 | ಹುಬ್ಬಳ್ಳಿ | ವಿಶೇಷ ಭೂಸ್ವಾಧೀನಾಧಿಕಾರಿಗಳು, ಕೆಐಎಡಿಬಿ, ಧಾರವಾಡ | ವಿಶೇಷ ಭೂಸ್ವಾಧೀನಾಧಿಕಾರಿಗಳು, ಕೆಐಎಡಿಬಿ, ಧಾರವಾಡ |
| 4 | ಹುಬ್ಬಳ್ಳಿ ನಗರ | ವಿಶೇಷ ಭೂಸ್ವಾಧೀನಾಧಿಕಾರಿಗಳು, ಕೆಐಎಡಿಬಿ, ಧಾರವಾಡ | ವಿಶೇಷ ಭೂಸ್ವಾಧೀನಾಧಿಕಾರಿಗಳು, ಕೆಐಎಡಿಬಿ, ಧಾರವಾಡ |
| 5 | ಕಲಘಟಗಿ | ಉಪ ಆಯುಕ್ತರು (ಆಡಳಿತ) ಹುಬ್ಬಳ್ಳಿ-ಧಾರವಾಡ ಮಹಾನಗರ ಪಾಲಿಕೆ ಹುಬ್ಬಳ್ಳಿ | ಯೋಜನಾ ನಿರ್ದೇಶಕರು, ಜಿಲ್ಲಾ ನಗರಾಭಿವೃದ್ಧಿ ಕೋಶ, ಧಾರವಾಡ |
| 6 | ನವಲಗುಂದ | ಉಪ ಆಯುಕ್ತರು (ಆಡಳಿತ) ಹುಬ್ಬಳ್ಳಿ-ಧಾರವಾಡ ಮಹಾನಗರ ಪಾಲಿಕೆ ಹುಬ್ಬಳ್ಳಿ | ವಿಶೇಷ ಭೂಸ್ವಾಧೀನಾಧಿಕಾರಿಗಳು, ರಾಷ್ಟ್ರೀಯ ಹೆದ್ದಾರಿ-4, ಮಿನಿ ವಿಧಾನ ಸೌಧ ಧಾರವಾಡ |
| 7 | ಅಣ್ಣಿಗೇರಿ | ಉಪ ಆಯುಕ್ತರು (ಆಡಳಿತ) ಹುಬ್ಬಳ್ಳಿ-ಧಾರವಾಡ ಮಹಾನಗರ ಪಾಲಿಕೆ ಹುಬ್ಬಳ್ಳಿ | ವಿಶೇಷ ಭೂಸ್ವಾಧೀನಾಧಿಕಾರಿಗಳು, ರಾಷ್ಟ್ರೀಯ ಹೆದ್ದಾರಿ-4, ಮಿನಿ ವಿಧಾನ ಸೌಧ ಧಾರವಾಡ |
| 8 | ಕುಂದಗೋಳ | ವಿಶೇಷ ಭೂಸ್ವಾಧೀನಾಧಿಕಾರಿಗಳು, ಕೆಐಎಡಿಬಿ, ಧಾರವಾಡ | ಯೋಜನಾ ನಿರ್ದೇಶಕರು, ಜಿಲ್ಲಾ ನಗರಾಭಿವೃದ್ಧಿ ಕೋಶ, ಧಾರವಾಡ |

**PR-749**

**ಕರ್ನಾಟಕ ಸರ್ಕಾರ**

**ಸಂಖ್ಯೆ: ಕಾಇ 18 ಎಲ್‌ಡಬ್ಲ್ಯೂಎ 2022**

**ಕರ್ನಾಟಕ ಸರ್ಕಾರದ ಸಚಿವಾಲಯ,**

**ವಿಕಾಸಸೌಧ,**

**ಬೆಂಗಳೂರು, ದಿನಾಂಕ: 28-07-2022**

## ಅಧಿಸೂಚನೆ

**ಕರ್ನಾಟಕ ರಾಜ್ಯದಾದ್ಯಂತ "ಭದ್ರತಾ ಏಜೆನ್ಸಿಗಳಲ್ಲಿ ಉದ್ಯೋಗ (ಕಛೇರಿ ಸಿಬ್ಬಂದಿ ಹಾಗೂ ಭದ್ರತಾ ಸಿಬ್ಬಂದಿಗಳನ್ನು ಏಜೆನ್ಸಿಯ ಮೂಲಕ ನಿಯೋಜಿಸಿಕೊಳ್ಳುವ ಎಲ್ಲಾ ಸಂಸ್ಥೆಗಳು ಹಾಗೂ ಉದ್ದಿಮೆಗಳ ಸಹಿತ)" ಅನುಸೂಚಿತ ಉದ್ದಿಮೆಯಲ್ಲಿ ಯಾವುದೇ ಕೆಲಸದಲ್ಲಿ ತೊಡಗಿರುವ ಕಾರ್ಮಿಕರಿಗೆ ಈ ಕೆಳಕಂಡ "ಕನಿಷ್ಠ ವೇತನ ಕೋಷ್ಟಕ"ದಲ್ಲಿ ನಿರ್ದಿಷ್ಟಪಡಿಸಿರುವಂತೆ ಕನಿಷ್ಠ ವೇತನ ದರಗಳನ್ನು ಪರಿಷ್ಕರಿಸಲು ರಾಜ್ಯ ಸರ್ಕಾರದ ಕರಡು ಪ್ರಸ್ತಾವನೆಯನ್ನು ಕರ್ನಾಟಕ ರಾಜ್ಯ ಪತ್ರದ ಭಾಗ - 4ಎರಲ್ಲಿ 19.03.2022ರಂದು ಪ್ರಕಟಿಸಿ, 1948ರ ಕನಿಷ್ಠ ವೇತನ ಕಾಯ್ದೆಯ (ಕೇಂದ್ರ ಕಾಯ್ದೆ ಸಂಖ್ಯೆ: XI) ರ ಕಲಂ 3(1) (ಬಿ) ಮತ್ತು 5 (1) (ಬಿ) ಖಂಡದ ಮೇರೆಗೆ ಬಾಧಿತರಾಗುವ/ ಸಂಬಂಧವಿರುವ ವ್ಯಕ್ತಿಗಳ ಗಮನಕ್ಕೆ ತರಲಾಗಿದ್ದು, ಅವರಿಂದ ಸಲಹೆ/ ಆಕ್ಷೇಪಣೆಗಳನ್ನು ಸ್ವೀಕರಿಸಲು ಎರಡು ತಿಂಗಳ ಕಾಲಾವಕಾಶವನ್ನು ನೀಡಲಾಗಿತ್ತು. ಸ್ವೀಕೃತಗೊಂಡ ಸಲಹೆ/ ಆಕ್ಷೇಪಣೆಗಳು ಮತ್ತು ಕರಡು ಪ್ರಸ್ತಾವನೆಯನ್ನು ಕರ್ನಾಟಕ ರಾಜ್ಯ ಕನಿಷ್ಠ ವೇತನ ಸಲಹಾ ಮಂಡಳಿಯ ಮುಂದೆ ಮಂಡಿಸಲಾಗಿತ್ತು.**

**ಕರ್ನಾಟಕ ರಾಜ್ಯ ಕನಿಷ್ಠ ವೇತನ ಸಲಹಾ ಮಂಡಳಿಯ ಸಭೆಯಲ್ಲಿ, ಸಂಬಂಧಪಟ್ಟಂತೆ ಸ್ವೀಕೃತವಾಗಿದ್ದ ಸಲಹೆ / ಆಕ್ಷೇಪಣೆಗಳ ಕುರಿತು ಚರ್ಚಿಸಲಾಗಿರುತ್ತದೆ. ಅದರನ್ವಯ, ಸಭೆಯ ನಡವಳಿಯಲ್ಲಿನ ಅಂಶಗಳನ್ನು ಗಮನದಲ್ಲಿಟ್ಟುಕೊಂಡು, ರಾಜ್ಯ ಸರ್ಕಾರವು 1948ರ ಕನಿಷ್ಠ ವೇತನ ಕಾಯ್ದೆಯ (ಕೇಂದ್ರ ಕಾಯ್ದೆ ಸಂಖ್ಯೆ: XI) ರ ಕಲಂ 3(1) (ಬಿ) ಮತ್ತು 5 (1) (ಬಿ) ಖಂಡದ ಮೂಲಕ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿ ಮತ್ತು ಈ ಹಿಂದಿನ ಎಲ್ಲಾ ಅಧಿಸೂಚನೆಗಳನ್ನು ರದ್ದುಪಡಿಸಿ, ಕರ್ನಾಟಕ ರಾಜ್ಯಾದ್ಯಂತ "ಭದ್ರತಾ ಏಜೆನ್ಸಿಗಳಲ್ಲಿ ಉದ್ಯೋಗ (ಕಛೇರಿ ಸಿಬ್ಬಂದಿ ಹಾಗೂ**

**ಭದ್ರತಾ ಸಿಬ್ಬಂದಿಗಳನ್ನು ಏಜೆನ್ಸಿಯ ಮೂಲಕ ನಿಯೋಜಿಸಿಕೊಳ್ಳುವ ಎಲ್ಲಾ ಸಂಸ್ಥೆಗಳು ಹಾಗೂ ಉದ್ದಿಮೆಗಳ ಸಹಿತ)"ಉದ್ದಿಮೆಯಲ್ಲಿ ಕೆಲಸ ಮಾಡುವ ಕಾರ್ಮಿಕರಿಗೆ ಈ ಅಧಿಸೂಚನೆ ಹೊರಡಿಸಿದ ದಿನಾಂಕದಿಂದ ಅನ್ವಯವಾಗುವಂತೆ ಕನಿಷ್ಠ ವೇತನವನ್ನು ಈ ಅಧಿಸೂಚನೆಯ ಅನುಸೂಚಿಯಲ್ಲಿ ಇರುವಂತೆ ಪರಿಷ್ಕರಿಸಲಾಗಿದೆ.**

## "ಕನಿಷ್ಠ ವೇತನ ಕೋಷ್ಟಕ"

| | ಭಾಗ-1 : ಕ್ಷೇತ್ರ ಸಿಬ್ಬಂದಿ (Field Staff) | | | | | | | | |
|---|---|---|---|---|---|---|---|---|---|
| ಕ್ರ. ಸಂ | ಕೆಲಸದ ವರ್ಗಗಳು | ಕನಿಷ್ಠ ವೇತನ ದರಗಳು | | | | | | | |
| | | ವಲಯ-1 | | ವಲಯ-2 | | ವಲಯ-3 | | ವಲಯ-4 | |
| | | ದಿನಕ್ಕೆ | ತಿಂಗಳಿಗೆ | ದಿನಕ್ಕೆ | ತಿಂಗಳಿಗೆ | ದಿನಕ್ಕೆ | ತಿಂಗಳಿಗೆ | ದಿನಕ್ಕೆ | ತಿಂಗಳಿಗೆ |
| ಅತಿ ಕುಶಲ ಕಾರ್ಮಿಕರು | | | | | | | | | |
| 1 | ಸೆಕ್ಯೂರಿಟಿ ಆಫೀಸರ್, ಫೀಲ್ಡ್ ಆಫೀಸರ್ ಮತ್ತು ಇತರೆ ಅತಿಕುಶಲ ವರ್ಗದ ಕೆಲಸಕ್ಕೆ | 668.68 | 17385.63 | 636.84 | 16557.74 | 606.51 | 15769.28 | 577.63 | 15018.36 |
| ಕುಶಲ ಕಾರ್ಮಿಕರು | | | | | | | | | |
| 2 | ಸೆಕ್ಯೂರಿಟಿ ಸೂಪರ್ ವೈಸರ್, ಸೆಕ್ಯೂರಿಟಿ ಇನ್ಸ್ ಪೆಕ್ಟರ್, ಶಸ್ತ್ರಾಸ್ತ್ರ ಹೊಂದಿದ ಸಹಾಯಕ ಸೆಕ್ಯೂರಿಟಿ ಆಫೀಸರ್, ಇಂಟಲಿಜೆನ್ಸ್ ಮತ್ತು ಫೈರ್ ಪೆಟಿಂಗ್ ಮತ್ತು ಇತರೆ ಕುಶಲ ಕೆಲಸಕ್ಕೆ | 617.63 | 16058.30 | 588.22 | 15293.62 | 560.21 | 14565.35 | 533.53 | 11008.00 |
| ಅರೆ ಕುಶಲ ಕಾರ್ಮಿಕರು | | | | | | | | | |
| 3 | ಶಸ್ತ್ರಾಸ್ತ್ರ ಹೊಂದಿರದ ಸೆಕ್ಯೂರಿಟಿ ಗಾರ್ಡ್, ಹೆಡ್‌ಗಾರ್ಡ್ (ಪುರುಷ / ಮಹಿಳೆ) ಸೆಕ್ಯುರಿಟಿ ಸರ್ಚರ್, ಲಿಫ್ಟ್ ಆಪರೇಟರ್ಸ್ ಮತ್ತು ಇತರೆ ಅರೆಕುಶಲ ಕೆಲಸಕ್ಕೆ | 605.47 | 15742.26 | 576.64 | 14992.63 | 549.18 | 14278.70 | 523.03 | 13598.76 |
| ಅಕುಶಲ ಕಾರ್ಮಿಕರು | | | | | | | | | |
| 4 | ಜವಾನ, ಆಫೀಸ್ ಬಾಯ್, ಅಟೆಂಡರ್, ಹೆಲ್ಪರ್ / ಸಹಾಯಕ, ದಲಾಯತ್, ಮಜ್ದೂರ್, ಸ್ವೀಪರ್, ಕ್ಲೀನರ್. ಮತ್ತು ಇತರೆ ಅಕುಶಲ ಕೆಲಸಕ್ಕೆ | 445.77 | 11590.14 | 424.55 | 11038.23 | 404.33 | 10512.60 | 493.31 | 12825.96 |

| ಕಛೇರಿ ಸಿಬ್ಬಂದಿಗಳು ಮತ್ತು ಚಾಲಕರು | | | | | | | | |
|---|---|---|---|---|---|---|---|---|
| ಹುದ್ದೆಗಳ ವಿವರ | ವಲಯ-1 | | ವಲಯ-2 | | ವಲಯ-3 | | ವಲಯ-4 | |
| | ದಿನಕ್ಕೆ | ತಿಂಗಳಿಗೆ | ದಿನಕ್ಕೆ | ತಿಂಗಳಿಗೆ | ದಿನಕ್ಕೆ | ತಿಂಗಳಿಗೆ | ದಿನಕ್ಕೆ | ತಿಂಗಳಿಗೆ |
| ಮ್ಯಾನೇಜರ್, ಪರ್ಸನಲ್ ಆಫೀಸರ್ ಮಾರ್ಕೆಟಿಂಗ್ ಮ್ಯಾನೇಜರ್/ ಕಛೇರಿ ಮೇಲ್ವಿಚಾರಣೆಯ ತತ್ಸಮಾನ ಹುದ್ದೆ | 702.10 | 18254.90 | 668.70 | 17385.60 | 636.84 | 16557.70 | 606.51 | 15769.30 |
| ಅಸಿಸ್ಟೆಂಟ್ ಮ್ಯಾನೇಜರ್ ಅಸಿಸ್ಟೆಂಟ್ ಪರ್ಸನಲ್ ಮ್ಯಾನೇಜರ್, ಸೀನಿಯರ್ ಅಕೌಂಟೆಂಟ್ ಮತ್ತು ತತ್ಸಮಾನ ಹುದ್ದೆ. | 668.68 | 17385.63 | 636.84 | 16557.74 | 606.51 | 15769.28 | 577.63 | 15018.36 |
| ಹಿರಿಯ ಗುಮಾಸ್ತ, ಕ್ಯಾಷಿಯರ್, ಜಡ್ಜ್ಮೆಂಟ್ ರೈಟರ್, ಸ್ಟೆನೋಗ್ರಾಫರ್, ಸ್ಟೋರ್ ಕೀಪರ್, ರಿಸೆಪ್ಷನಿಸ್ಟ್, (ಸ್ವಾಗತಗಾರರು) ಮತ್ತು ತತ್ಸಮಾನ ಹುದ್ದೆ | 617.63 | 16058.30 | 588.22 | 15293.62 | 560.21 | 14565.35 | 533.53 | 11008.00 |
| ಕಿರಿಯ ಗುಮಾಸ್ತ , ಬುಕಿಂಗ್ ಗುಮಾಸ್ತ, ಕಂಪ್ಯೂಟರ್ ಆಪರೇಟರ್, ಟೈಪಿಸ್ಟ್, ಟೆಲಿಫೋನ್ ಆಪರೇಟರ್, ಡಾಟಾ ಎಂಟ್ರೀ ಆಪರೇಟರ್ ಮತ್ತು ತತ್ಸಮಾನ ಹುದ್ದೆ. | 605.47 | 15742.26 | 576.64 | 14992.63 | 549.18 | 14278.70 | 523.03 | 13598.76 |
| ಹೆವಿ ವೆಹಿಕಲ್ ಡ್ರೈವರ್, ಟ್ರ್ಯಾಕ್ಟರ್ ಡ್ರೈವರ್ ಬಹು ಆಕ್ಸೆಲ್ ಮತ್ತು ಘನ ವಾಹನ ಚಾಲಕರು, ಅರ್ಥ್ ಮೂವರ್ಸ್ ಚಾಲಕರು, ಕ್ರೇನ್ ಜೋಡಿಸಿದ ವಾಹನ ಚಾಲಕರು, ಟ್ರಾಕ್ಟರ್ ಚಾಲಕರು, ರೋಡ್ ರೋಲರ್ ಮತ್ತು ರಸ್ತೆ ನಿರ್ಮಾಣ ಕಾಮಗಾರಿ ವಾಹನಗಳ ಚಾಲಕರು | 617.63 | 16058.30 | 588.22 | 15293.62 | 560.21 | 14565.35 | 533.53 | 11008.00 |
| ಕಾರ್ ಡ್ರೈವರ್ ಜೀಪ್ ಡ್ರೈವರ್ ಲಘು ವಾಹನ ಚಾಲಕರು, ಟಂ ಟಂ, ತ್ರಿಚಕ್ರ ವಾಹನ ಚಾಲಕರು | 605.47 | 15742.26 | 576.64 | 14992.63 | 549.18 | 14278.70 | 523.03 | 13598.76 |

ಮೇಲ್ಕಂಡ ಕನಿಷ್ಠ ವೇತನ ದರಗಳನ್ನು ಸರ್ಕಾರವು ಈ ಕೆಳಕಂಡ ಷರತ್ತುಗಳಿಗೊಳಪಟ್ಟು ನಿಗದಿಪಡಿಸಿದ್ದು, ಈ ಎಲ್ಲಾ ಷರತ್ತುಗಳನ್ನು ಯಥಾವತ್ತಾಗಿ ಉದ್ಯೋಗದಾತರು ಪಾಲಿಸಲು ಬಾದ್ಯಸ್ಥರಿರುತ್ತಾರೆ;

1. ವ್ಯತ್ಯಾಸವಾಗುವ ತುಟ್ಟಿಭತ್ಯೆ:-

ತುಟ್ಟಿಭತ್ಯೆ ಲೆಕ್ಕಾಚಾರವನ್ನು ವರ್ಷಕ್ಕೊಮ್ಮೆ ಮಾಡಲಾಗುತ್ತದೆ. ಹಿಂದಿನ ಕ್ಯಾಲೆಂಡರ್ ವರ್ಷದ ಹನ್ನೆರಡು (12) ತಿಂಗಳುಗಳ ಗ್ರಾಹಕ ಬೆಲೆ ಸೂಚ್ಯಾಂಕಗಳ ಸರಾಸರಿ ಆಧಾರದ ಮೇಲೆ ಏಪ್ರಿಲ್ ಮೊದಲನೇ ದಿನಾಂಕದಂದು ಪ್ರತಿ ವರ್ಷ ಲೆಕ್ಕಾಚಾರ ಮಾಡತಕ್ಕದ್ದು. ಅಲ್ಲದೇ ಗ್ರಾಹಕ ಬೆಲೆ ಸೂಚ್ಯಂಕಗಳ ಸಂಖ್ಯೆಯ ವಾರ್ಷಿಕ ಸರಾಸರಿ ಆಧಾರದ ಮೇಲೆ ಹೆಚ್ಚುವರಿಯಾದ ಅಥವಾ ಕಡಿಮೆಯಾದ ಪ್ರಮಾಣವನ್ನು ಆಧರಿಸಿ ಲೆಕ್ಕ ಹಾಕಲಾಗುತ್ತದೆ. ಆದ್ದರಿಂದ ಮೊದಲ ಲೆಕ್ಕಾಚಾರವು ಗ್ರಾಹಕ ಬೆಲೆ ಸೂಚ್ಯಾಂಕದ (ಜನವರಿ 2020 ರಿಂದ ಡಿಸೆಂಬರ್ 2020) ರ ಸರಾಸರಿ ಆಧಾರದ ಮೇಲೆ 2021 ಏಪ್ರಿಲ್ 1 ನೇ ತಾರೀಖಿನಿಂದ ಜಾರಿಗೆ ಬರುತ್ತದೆ. ಗ್ರಾಹಕ ಬೆಲೆ ಸೂಚ್ಯಾಂಕ 7616 ಅಂಶಗಳಿಗಿಂತ ಹೆಚ್ಚಾಗುವ ಪ್ರತಿ ಅಂಶಕ್ಕೆ ಎಲ್ಲಾ ವರ್ಗದ ಕಾರ್ಮಿಕರಿಗೆ ದಿನ ಒಂದಕ್ಕೆ ನಾಲ್ಕು (4) ಪೈಸೆಯಂತೆ ತುಟ್ಟಿ ಭತ್ಯೆಯನ್ನು ಪಾವತಿಸತಕ್ಕದ್ದು.

ತುಟ್ಟಿಭತ್ಯೆಯನ್ನು ಲೆಕ್ಕಾಚಾರ ಮಾಡುವ ವಿಧಾನ:-

ಅ) ಮಾಸಿಕ ವೇತನವನ್ನು ಪಡೆಯುವವರು:-

*ತಿಂಗಳ ತುಟ್ಟಿಭತ್ಯೆ = ಪ್ರತಿ ವರ್ಷ ಹೆಚ್ಚಾಗುವ ಅಥವಾ ಕಡಿಮೆಯಾಗುವ ಗ್ರಾಹಕ ಬೆಲೆ ಸೂಚ್ಯಾಂಕದ ಅಂಶಗಳು (ಸಿ.ಪಿ.ಐ) x ತುಟ್ಟಿಭತ್ಯೆಯ ದರ x 30 ದಿನಗಳು*

ದಿನಗೂಲಿ ಗಳಿಕೆದಾರರ ಸಂದರ್ಭದಲ್ಲಿ ಮಾಸಿಕ ವೇತನ ದರಗಳನ್ನು ಇಪ್ಪತ್ತಾರು (26) ದಿನಗಳಿಂದ ವಿಭಾಗಿಸಿ, ನಾಲ್ಕು (4) ರಜಾ ದಿನಗಳಿಗೆ ವೇತನವನ್ನು ನೀಡುವುದೂ ಸೇರಿದಂತೆ ಈ ಕೆಳಕಂಡಂತೆ ಲೆಕ್ಕ ಹಾಕತಕ್ಕದ್ದು. ಭಾಗಿಸಿದಾಗ ಬಂದ ದರವು ಭಿನ್ನಾಂಕವಾಗಿದ್ದಲ್ಲಿ ಅದನ್ನು ಸಮೀಪದ ರೂಪಾಯಿಗೆ ಪೂರ್ಣಗೊಳಿಸುವುದು.

ಆ) ದಿನಗೂಲಿ ವೇತನ ಪಡೆಯುವವರು :-

*ದಿನದ ತುಟ್ಟಿಭತ್ಯೆ = ಪ್ರತಿ ವರ್ಷ ಹೆಚ್ಚಾಗುವ ಅಂಶಗಳು x ತುಟ್ಟಿಭತ್ಯೆಯ ದರ x 30 ದಿನಗಳು / 26*

2. ಮಹಿಳೆಯರು, ಪುರುಷರು ಮತ್ತು ತೃತೀಯ ಲಿಂಗಿಗಳು ಒಂದೇ ರೀತಿಯ ಕೆಲಸವನ್ನು ನಿರ್ವಹಿಸಿದ ಸಂದರ್ಭಗಳಲ್ಲಿ ಎಲ್ಲರಿಗೂ ಸಮಾನ ದರದ ವೇತನಗಳನ್ನು ಸಂದಾಯ ಮಾಡತಕ್ಕದ್ದು.
3. ಅಧಿಸೂಚನೆಯಲ್ಲಿ ವರ್ಗವನ್ನು ನಮೂದಿಸದೆ ಇರುವ ವರ್ಗಗಳ ಕಾರ್ಮಿಕರಿಗೆ ಅದೇ ಸ್ವರೂಪದ ಕೆಲಸ ನಿರ್ವಹಿಸುತ್ತಿರುವ ಇತರೆ ವರ್ಗದ ಕಾರ್ಮಿಕರಿಗೆ ಪಾವತಿ ಮಾಡುತ್ತಿರುವ ವೇತನವನ್ನು ಸಂದಾಯ ಮಾಡತಕ್ಕದ್ದು.
4. ತುಂಡು ಆಧಾರದ ಮೇಲೆ ಕೆಲಸ ಮಾಡುವ ಕಾರ್ಮಿಕರ 8 ಗಂಟೆಗಳ ಕೆಲಸದ ವೇತನವು ಅದೇ ತರಹದ ಕೆಲಸ ಮಾಡುವ ಕಾರ್ಮಿಕರ ಒಂದು ದಿನದ ವೇತನಕ್ಕಿಂತ ಕಡಿಮೆ ಇರಕೂಡದು. ಒಂದು ದಿನದ ಕೆಲಸ ಎಂದರೆ 8 ಗಂಟೆಗಳ ಕೆಲಸ ಎಂದು ತಿಳಿಯತಕ್ಕದ್ದು. ಕಾರ್ಮಿಕರನ್ನು 8 ಗಂಟೆಗಳಿಗಿಂತ ಕಡಿಮೆ ಅವಧಿಯ ಕೆಲಸಕ್ಕೆ ನೇಮಿಸಿಕೊಂಡರೆ ಅಂತಹ ಕಡಿಮೆ ಅವಧಿಗೆ ಅನುಗುಣವಾಗಿ ವೇತನವನ್ನು ಆ ವರ್ಗದ ದಿನದ ಅಥವಾ ತಿಂಗಳ ವೇತನದ ಆಧಾರದ ಮೇಲೆ ಲೆಕ್ಕ ಹಾಕುವುದು.
5. ಸಂಸ್ಥೆಯಲ್ಲಿ ನಿಗದಿಪಡಿಸಿರುವ ವಾರದ ರಜೆ ಅಥವಾ ಹಬ್ಬದ ರಜಾ ದಿನಗಳಲ್ಲಿ ಕೆಲಸ ಮಾಡುವ ಕಾರ್ಮಿಕರಿಗೆ ಕನಿಷ್ಟ ವೇತನ ಕಾಯ್ದೆ ಮತ್ತು ನಿಯಮಗಳಿಗೆ ಒಳಪಟ್ಟು ಸಾಮಾನ್ಯ ವೇತನದ ಎರಡು ಪಟ್ಟು ವೇತನವನ್ನು ಪಾವತಿ ಮಾಡತಕ್ಕದ್ದು.
6. ಕೆಲಸಗಾರರು ದಿನದ ನಿಗದಿತ ಅವಧಿಗಿಂತ ಹೆಚ್ಚು ಸಮಯ ಕೆಲಸ ನಿರ್ವಹಿಸಿದಲ್ಲಿ ಅಂತಹ ಹೆಚ್ಚುವರಿ ಅವಧಿ ಕೆಲಸಕ್ಕೆ ಆತನ ವೇತನದ ಎರಡು ಪಟ್ಟು ವೇತನವನ್ನು ಪಾವತಿಸತಕ್ಕದ್ದು.

**7. ಟ್ರೈನಿಗಳಿಗೆ ಆ ವರ್ಗದ ನೌಕರರು ಪಡೆಯುತ್ತಿರುವ ವೇತನದ ಪ್ರತಿಶತ 75 ರಷ್ಟು ವೇತನವನ್ನು ಶಿಷ್ಯ ವೇತನವನ್ನಾಗಿ ಪಾವತಿಸತಕ್ಕದ್ದು.**

**8. ನೌಕರರುಗಳ ವೇತನವನ್ನು ಚೆಕ್ ಮೂಲಕ ಪಾವತಿಸುವುದು ಅಥವಾ ನೌಕರರ ಬ್ಯಾಂಕ್ ಖಾತೆಗೆ ನೇರವಾಗಿ ಜಮೆ ಮಾಡತಕ್ಕದ್ದು.**

**9. ಒಂದು ದಿನದ ಕೆಲಸ ಎಂದರೆ ಎಂಟು (8) ಗಂಟೆಗಳ ಕೆಲಸ ಎಂದು ತಿಳಿಯತಕ್ಕದ್ದು. ಕಾರ್ಮಿಕರನ್ನು 4 ಗಂಟೆಗಳಿಗಿಂತ ಕಡಿಮೆ ಅವಧಿಯ ಕೆಲಸಕ್ಕೆ ನೇಮಿಸಿಕೊಂಡರೆ ಅಂತಹ ಕಡಿಮೆ ಅವಧಿಗೆ ಅನುಗುಣವಾಗಿ ಕನಿಷ್ಠ ವೇತನವನ್ನು ಕರ್ನಾಟಕ ಕನಿಷ್ಠ ವೇತನ ನಿಯಮಗಳು, 1958ರ ನಿಯಮ 27 (4) ರನ್ವಯ ಗಂಟೆಯ ಆಧಾರದ ಮೇಲೆ ಲೆಕ್ಕ ಹಾಕುವುದು.**

**10.ಈ ಅಧಿಸೂಚನೆಯ ವಲಯಗಳನ್ನು ಈ ಕೆಳಕಂಡಂತೆ ವಿಂಗಡಿಸಲಾಗಿದೆ.**

| | |
|---|---|
| **ವಲಯ-1** | **ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ವ್ಯಾಪ್ತಿ ಮತ್ತು ಗೊತ್ತುಪಡಿಸಿದ ಆಗ್ಲೋಮರೇಷನ್ ಪ್ರದೇಶಗಳು** |
| **ವಲಯ-2** | **ರಾಜ್ಯದ ಎಲ್ಲಾ ಮಹಾನಗರಪಾಲಿಕೆಗಳು ಮತ್ತು ಇವುಗಳಿಗೆ ಗೊತ್ತುಪಡಿಸಿದ ಆಗ್ಲೋಮರೇಷನ್ ಪ್ರದೇಶಗಳು** |
| **ವಲಯ-3** | **ವಲಯ-2 ರಲ್ಲಿ ನಮೂದಿಸಿರುವ ಪ್ರದೇಶಗಳನ್ನು ಹೊರತುಪಡಿಸಿ ರಾಜ್ಯದ ಎಲ್ಲಾ ಜಿಲ್ಲಾ ಕೇಂದ್ರಗಳು.** |
| **ವಲಯ-4** | **ವಲಯ-2 ಮತ್ತು 3 ರಲ್ಲಿ ನಮೂದಿಸಿರುವ ಪ್ರದೇಶಗಳನ್ನು ಹೊರತುಪಡಿಸಿ ರಾಜ್ಯದ ಇತರೆ ಭಾಗಗಳು** |

11. ಈ ಅಧಿಸೂಚನೆಯಲ್ಲಿ ನಮೂದಿಸಿದ ಉದ್ಯೋಗಿಗಳನ್ನು ನಾಲ್ಕು ಪ್ರವರ್ಗಗಳನ್ನಾಗಿ ವಿಂಗಡಿಸಿದ್ದು, ಪ್ರತಿ ಪ್ರವರ್ಗದ ವ್ಯಾಖ್ಯಾನವು ಕೆಳಗಿನಂತಿರುತ್ತದೆ;

i) ಅಕುಶಲ ಕಾರ್ಮಿಕರು (Un-skilled Workers)

ಅಕುಶಲ ಕಾರ್ಮಿಕರೆಂದರೆ ದೈಹಿಕ ಶ್ರಮದ ಆಧಾರದ ಮೇಲೆ ಕೆಲಸ ನಿರ್ವಹಿಸುವ ಕಾರ್ಮಿಕರಾಗಿದ್ದು, ವೈಯಕ್ತಿಕ ನಿರ್ಣಯ ಹಾಗೂ ಪೂರ್ವ ಅನುಭವದ ಅವಶ್ಯಕತೆಯಿಲ್ಲದ ಸರಳ ಕರ್ತವ್ಯವನ್ನು ನಿರ್ವಹಿಸುವ ಕಾರ್ಮಿಕರಾಗಿರುತ್ತಾರೆ. ಉದ್ಯೋಗ / ವೃತ್ತಿಯ ಪರಿಸರದ ಪರಿಚಯ ಮತ್ತು ದೈಹಿಕ ಶ್ರಮ ಇಲ್ಲಿ ಮುಖ್ಯ ಅಂಶವಾಗಿರುತ್ತದೆ.

ii) ಅರೆ ಕುಶಲ ಕಾರ್ಮಿಕರು (Semi Skilled Workers)

ಅರೆ ಕುಶಲ ಕಾರ್ಮಿಕರೆಂದರೆ ವೈಯಕ್ತಿಕ ನಿರ್ಣಯಕ್ಕೆ ಹೆಚ್ಚು ಅವಕಾಶವಿಲ್ಲದ ನಿರ್ದಿಷ್ಟ ನಿಯತ ಕ್ರಮದ ಪುನರಾವರ್ತನೆಯ ಕೆಲಸಗಳನ್ನು ನಿರ್ವಹಿಸುವ ಕಾರ್ಮಿಕರಾಗಿರುತ್ತಾನೆ. ಕಾರ್ಮಿಕರ ಕೆಲಸವು ನಿರ್ದಿಷ್ಠ ಮಿತಿಯನ್ನು ಹೊಂದಿದ್ದು, ಇನ್ನೊಬ್ಬ ವ್ಯಕ್ತಿಯ ತೀರ್ಮಾನಕ್ಕೆ ಅನುಗುಣವಾಗಿ ನಿರ್ವಹಿಸುವ ಕೆಲಸವಾಗಿರುತ್ತದೆ. ಹಾಗೂ ಯಂತ್ರಗಳ ಸಹಾಯದಿಂದ ನಿರ್ವಹಿಸುವ ಸರಳ ಕೆಲಸಗಳನ್ನು ಮಾಡುವವರಾಗಿರುತ್ತಾರೆ.

iii) ಕುಶಲ ಕಾರ್ಮಿಕರು (skilled Workers)

ಕುಶಲ ಕಾರ್ಮಿಕರು ತಮ್ಮ ಸ್ವಂತ ನಿರ್ಣಯ, ತೀರ್ಮಾನ ಮತ್ತು ವಿವೇಚನೆಗೆ ಒಳಪಟ್ಟು ಜವಾಬ್ದಾರಿಯುತ ಕರ್ತವ್ಯಗಳನ್ನು ನಿರ್ವಹಿಸುವ ಕಾರ್ಮಿಕರಾಗಿರುತ್ತಾರೆ. ತಮ್ಮ ವೃತ್ತಿ ಮತ್ತು ಉದ್ಯೋಗದ ಬಗ್ಗೆ ಆಳವಾದ ಮತ್ತು ಅಮೂಲಾಗ್ರ ಜ್ಞಾನವನ್ನು ಹೊಂದಿದ ಕಾರ್ಮಿಕರಾಗಿರುತ್ತಾರೆ. ಸದರಿ ಉದ್ಯೋಗ ಮತ್ತು ವೃತ್ತಿಯ ಬಗ್ಗೆ ವಿದ್ಯಾರ್ಹತೆ ಪರಿಣಿತಿ ಮತ್ತು ಅನುಭವ ಹೊಂದಿರುತ್ತಾರೆ.

Iv ) ಅತಿ ಕುಶಲ ಕಾರ್ಮಿಕರು (Highly Skilled Workers)

ಅತಿ ಕುಶಲ ಕಾರ್ಮಿಕರೆಂದರೆ ಕರ್ತವ್ಯವನ್ನು ನಿರ್ವಹಿಸಲು ದಕ್ಷತೆ ಮತ್ತು ಅತೀವ ಸಾಮರ್ಥ್ಯ ಇರುವ ಕಾರ್ಮಿಕರಾಗಿದ್ದು, ಕುಶಲ ಕಾರ್ಮಿಕರ ಸಹಿತ ಎಲ್ಲಾ ಕಾರ್ಮಿಕರ ಕರ್ತವ್ಯಗಳ ಮೇಲ್ವಿಚಾರಣೆ ನಡೆಸಿ ಪರಿಣಾಮಕಾರಿಯಾಗಿ ಫಲಿತಾಂಶವನ್ನು ಸಾಧಿಸಲು ಶಕ್ತರಾಗಿರುವ ಕಾರ್ಮಿಕರಾಗಿರುತ್ತಾರೆ ಹಾಗೂ ಸದರಿ ಉದ್ಯೋಗ ಮತ್ತು ವೃತ್ತಿಯ ಬಗ್ಗೆ ವಿಶೇಷ ಜ್ಞಾನ ಮತ್ತು ಪರಿಣಿತಿಯನ್ನು ಹೊಂದಿರುತ್ತಾರೆ.

**ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ**
**ಮತ್ತು ಅವರ ಹೆಸರಿನಲ್ಲಿ**

**(ಎ. ಉಮಾದೇವಿ)**
**ಪೀಠಾಧಿಕಾರಿ-2,**
**ಕಾರ್ಮಿಕ ಇಲಾಖೆ (ಕನಿಷ್ಠ ವೇತನ)**